# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಮಾನ್ಯ ಸದಸ್ಯರ ಹೆಸರು** | : | **ಶ್ರೀ ಬಲ್ಕೀಸ್ ಬಾನು (ವಿಧಾನಸಭಾ ಕ್ಷೇತ್ರ)** |
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **420 (370)** |
| **ಉತ್ತರಿಸಬೇಕಾದ ಸಚಿವರು** | : | **ಕೃಷಿ ಸಚಿವರು** |
| **ಉತ್ತರಿಸಬೇಕಾದ ದಿನಾಂಕ** | : | **30-01-2026** |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕೆಳದಿ ಶಿವಪ್ಪ ನಾಯಕ ಕೃಷಿ & ತೋಟಗಾರಿಕೆ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಇರುವಕ್ಕಿ, ಶಿವಮೊಗ್ಗ, ಇದರ ಅಧೀನದಲ್ಲಿರುವ ವಲಯ ಕೃಷಿ ಮತ್ತು ತೋಟಗಾರಿಕಾ ಸಂಶೋಧನಾ ಕೇಂದ್ರ ಬ್ರಹ್ಮಾವರದ 350 ಎಕರೆ ಕೃಷಿ ಆವರಣದಲ್ಲಿ ಆಧುನಿಕ ವ್ಯವಸ್ಥೆಯುಳ್ಳ ಡಿಪ್ಲೋಮೋ ಕೃಷಿ ಮಹಾವಿದ್ಯಾಲಯವನ್ನು ಯಾವಾಗ ಪ್ರಾರಂಭಮಾಡಲಾಯಿತು; | ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗದ ವ್ಯಾಪ್ತಿಯಲ್ಲಿರುವ ವಲಯ ಕೃಷಿ ಮತ್ತು ತೋಟಗಾರಿಕಾ ಸಂಶೋಧನಾ ಕೇಂದ್ರ ಬ್ರಹ್ಮಾವರದ ಆವರಣದಲ್ಲಿ 4ನೇ ಶೈಕ್ಷಣಿಕ ಮಂಡಳಿಯ ಅನುಮೋದನೆಯಂತೆ ಸಂಖ್ಯೆ UAHSS/R/Starting of Diploma College/Brahmavar/27-29(a)/2014-15, dated: 11-11-2014 ರ ಆದೇಶದ ಮೇರೆಗೆ 2014-15ನೇ ಸಾಲಿನಿಂದ ಡಿಪ್ಲೋಮಾ ಕೃಷಿ ಮಹಾವಿದ್ಯಾಲಯವು ಪ್ರಾರಂಭಗೊಂಡಿರುತ್ತದೆ. |
| ಆ | ಡಿಪ್ಲೋಮೋ ಕಾಲೇಜು ಕಟ್ಟಡ ನಿರ್ಮಾಣಕ್ಕೆ ನಬಾರ್ಡ್ ಸಂಸ್ಥೆಯಿಂದ ರೂ.5.00 ಕೋಟಿ ವಿದ್ಯಾರ್ಥಿ ನಿಲಯಕ್ಕೆ ರೂ.5.00 ಕೋಟಿ ಹಾಗೂ ವಿದ್ಯಾರ್ಥಿನಿಯರ ವಲಯಕ್ಕೆ ರೂ.5.00 ಕೋಟಿ ವ್ಯಹಿಸಲಾಗಿರುವುದು ಹಾಗೂ ಕಾಲೇಜಿನಲ್ಲಿ ವಿದ್ಯಾರ್ಥಿಗಳಿಗೆ ಹೈಟೆಕ್ ತಂತ್ರಜ್ಞಾನವನ್ನು ಒಳಗೊಂಡಿರುವ ತರಗತಿ ಕೊಠಡಿ, ಪ್ರಯೋಗಾಲಯ, ಗ್ರಂಥಾಲಯ, ಗಣಕಯಂತ್ರದ ಕೊಠಡಿಗಳನ್ನು ಹೊಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗದ ವ್ಯಾಪ್ತಿಯಲ್ಲಿರುವ ಬ್ರಹ್ಮಾವರದ ಕೃಷಿ ಡಿಪ್ಲೋಮಾ ಮಹಾವಿದ್ಯಾಲಯ ಸ್ಥಾಪನೆಗೆ ವಿದ್ಯಾರ್ಥಿ / ವಿದ್ಯಾರ್ಥಿನಿಯರ ವಸತಿ ನಿಲಯಗಳ ನಿರ್ಮಾಣಕ್ಕೆ ನಬಾರ್ಡ್ ಸಂಸ್ಥೆಯಿಂದ ಹಣಕಾಸು ನೆರವು ಪಡೆಯಲಾಗಿರುತ್ತದೆ ಹಾಗೂ ಕಾಲೇಜಿನಲ್ಲಿ ವಿದ್ಯಾರ್ಥಿಗಳಿಗೆ ಹೈಟೆಕ್ ತಂತ್ರಜ್ಞಾನ, ತರಗತಿ ಕೊಠಡಿ, ಪ್ರಯೋಗಾಲಯ, ಗ್ರಂಥಾಲಯ, ಗಣಕಯಂತ್ರದ ಕೊಠಡಿಗಳನ್ನು ಹೊಂದಿರುತ್ತದೆ. |
| ಇ | ಸದರಿ ಕೃಷಿ ಡಿಪ್ಲೋಮೋ ಕಾಲೇಜು 2023-24 ನೇ ಸಾಲಿನ ನೂತನ ರಾಷ್ಟ್ರೀಯ ಶಿಕ್ಷಣ ನೀತಿಯ ಮಾರ್ಗಸೂಚಿಯಂತೆ ಸ್ಥಗಿತಗೊಳಿಸಲಾಗಿದ್ದು, ಮುಂದಿನ ಶೈಕ್ಷಣಿಕ ವರ್ಷದಲ್ಲಿ ಇದೇ ಕಟ್ಟಡದಲ್ಲಿ ಕೃಷಿ ಕಾಲೇಜನ್ನು ಪ್ರಾರಂಭಿಸುವ ಯೋಜನೆ ಅಥವಾ ಡಿಪ್ಲೋಮೋ ಕೃಷಿ ಕಾಲೇಜನ್ನು ಪುನರಾರಂಭಿಸುವ ಯೋಜನೆ ಸರ್ಕಾರದ ಮುಂದಿದೆಯೇ; ಇಲ್ಲವಾದಲ್ಲಿ, ಸರ್ಕಾರದ ನೀತಿಯಿಂದ ರೈತರ ಮಕ್ಕಳಿಗೆ ಅನ್ಯಾಯವಾಗದಂತೆ ಸರ್ಕಾರ ಸೂಕ್ತ ಕ್ರಮವಹಿಸುವುದೇ? | ಉಡುಪಿ ಜಿಲ್ಲೆಯ ಬ್ರಹ್ಮಾವರದಲ್ಲಿರುವ ಕೃಷಿ ಡಿಪ್ಲೋಮಾ ಕಾಲೇಜನ್ನು 32ನೇ ಸಮನ್ವಯ ಸಮಿತಿಯ ಸಭೆಯಲ್ಲಿ ತೀರ್ಮಾನಿಸಿದಂತೆ, ಬೋದಕ, ಬೋಧಕೇತರರ ಕೊರತೆ, ಮೂಲಸೌಕರ್ಯಗಳ ಕೊರತೆ ಹಾಗೂ ಹಣಕಾಸಿನ ಸಮಸ್ಯೆಗಳ ಕಾರಣಗಳಿಂದಾಗಿ ಸ್ಥಗಿತಗೊಳಿಸಲಾಗಿರುತ್ತದೆ. ಆದರೆ 33ನೇ ಸಮನ್ವಯ ಸಮಿತಿಯ ಸಭೆಯ ತೀರ್ಮಾನದಂತೆ ಡಿಪ್ಲೋಮಾ ಕೃಷಿ ಕಾಲೇಜನ್ನು ಪ್ರಾರಂಭಿಸಲಾಗಿರುತ್ತದೆ.<br><br>ಅದಾಗ್ಯೂ, ಡಿಪ್ಲೋಮಾ ಕಾಲೇಜನ್ನು ಕೃಷಿ ಸ್ನಾತಕ ಪದವಿ ಮಹಾವಿದ್ಯಾಲಯವನ್ನಾಗಿ ಮೇಲ್ದರ್ಜೆಗೇರಿಸಲು ಸಲ್ಲಿಸಿದ್ದ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯು ಒಪ್ಪಿರುವುದಿಲ್ಲ. |

ಇ-ಸಂಖ್ಯೆ: AGRI/7/AUS/2026

(ಎನ್. ಚಲುವರಾಯಸ್ವಾಮಿ)
ಕೃಷಿ ಸಚಿವರು